<u>ಅಸಲು ದಾವಾ ಸಂಖ್ಯೆ: **- 5/2015**</u> **ಪಿ.ಡಬ್ಲ್ಯೂ:-3**

ದಿನಾಂಕಃ **06-11-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು :- **1, 2** ಮತ್ತು **4** ಪ್ರತಿವಾದಿ ಪರ ವಕೀಲರಿಂದ :-</u>

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ವಿಚಾರಗಳನ್ನು ನಾನೇ ಹೇಳಿಸಿ ಬರೆಸಿರುತ್ತೇನೆ. ವಾದಿಯು ದಾವಾ ಆಸ್ತಿಗೆ ಸಂಬಂಧಪಟ್ಟಂತೆ ದಾವೆಯನ್ನು ಸಲ್ಲಿಸಿದ್ದಾರೆ. ವಾದಿಯ ದಾವಾ ಆಸ್ತಿಯಲ್ಲಿ ಬೇರೆಯವರು ಮನೆ ಕಟ್ಟಿದ್ದಾರೆ ಎಂಬ ವಿಚಾರಕ್ಕಾಗಿ ದಾವೆಯನ್ನು ಸಲ್ಲಿಸಿದ್ದಾರೆ. ಮನೆಯನ್ನು ಯಾರು ಕಟ್ಟಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಗಳು ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದಾರೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ದಾವಾ ಆಸ್ತಿಯಲ್ಲಿ ಸುಮಾರು **40-45** ವರ್ಷಗಳಿಂದ ಸ್ವಾಧೀನಾನುಭವದಲ್ಲಿದ್ದಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯು ಪ್ರತಿವಾದಿಗಳ ಹೆಸರಿನಲ್ಲಿ ಪಂಚಾಯಿತಿ ದಾಖಲೆಗಳು ಇವೆ ಎಂದರೆ ಸರಿಯಲ್ಲ. ದಾವಾ ಆಸ್ತಿಯು ಈಗ ವಾದಿಯ ಹೆಸರಿನಲ್ಲಿ ಇರುತ್ತದೆ. ದಾವಾ ಆಸ್ತಿಯು ವಾದಿಯ ಹೆಸರಿನಲ್ಲಿದ್ದ ಬಗ್ಗೆ ಪಹಣಿಯನ್ನು ನೋಡಿದ್ದೇನೆ. ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಪಂಚಾಯಿತಿ ದಾಖಲೆಗಳಲ್ಲಿ **5** ನೇ ಪ್ರತಿವಾದಿಯ ಹೆಸರಿನಲ್ಲಿದೆ ಎಂದರೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯ ಚಕ್ಕುಬಂಧಿ ಪೂರ್ವಕ್ಕೆ ಖಾಸೀಂ ಸಾಬ್ ರವರ ಜಮೀನು, ಪಶ್ಚಿಮಕ್ಕೆ ದೇವರಿಗೆ ಸೇರಿದ ಜಮೀನು, ಉತ್ತರಕ್ಕೆ ರಾಂಪುರಕ್ಕೆ ಹೋಗುವ ರಸ್ತೆ, ದಕ್ಷಿಣಕ್ಕೆ ಉಂಬಳಿ ಜಮೀನು. ಮೇಲ್ಕಂಡ ಸುಳ್ಳು ಚಕ್ಕುಬಂಧಿಯನ್ನು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ಈಗ ವ್ಯವಸಾಯವನ್ನು ಮಾಡುತ್ತಿದ್ದಾರೆ. ದಾವಾ ಆಸ್ತಿಯಲ್ಲಿ ರಾಗಿಯನ್ನು ವಾದಿಗಳು ಬೆಳೆಯುತ್ತಿದ್ದಾರೆ. ದಾವಾ ಆಸ್ತಿಯಲ್ಲಿ ಮನೆಯನ್ನು ಕಟ್ಟಿದ್ದಾರೆ ಯಾವುದೇ ಬೆಳೆಯನ್ನು ಬೆಳೆಯುತ್ತಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ಎಲ್ಲಾ ವಿಚಾರಗಳು ಸುಳ್ಳಿನಿಂದ ಕೂಡಿದೆ ಎಂದರೆ

ಸರಿಯಲ್ಲ. ಈ ದಾವೆಯ ಬಗ್ಗೆ ನನಗೆ ಯಾವುದೇ ವಿಚಾರ ಗೊತ್ತಿಲ್ಲದಿದ್ದರೂ ಸಹ ವಾದಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ- 5 ನೇ ಪ್ರತಿವಾದಿ ಪರ ವಕೀಲರಿಂದಃ-</u>

ದಾವಾ ಆಸ್ತಿಯು ವಾದಿಯ ಹೆಸರಿನಲ್ಲಿದ್ದು, ವಾದಿಯ ಹೆಸರಿನಲ್ಲಿರುವ ಬಗ್ಗೆ ಪಹಣಿಯನ್ನು ನೋಡಿದ್ದೇನೆ ಆದರೆ ಯಾವ ಬೆಳೆಯನ್ನು ಬೆಳೆಯುತ್ತಾರೆ ಎಂಬ ಬಗ್ಗೆ ನಮೂದಾಗಿರುವುದನ್ನು ನಾನು ನೋಡಿರುವುದಿಲ್ಲ. ಪಹಣಿಯಲ್ಲಿ ಮನೆ ಮತ್ತು ಜಾಗ ಎಂದು ನಮೂದಾಗಿದೆ ಎಂದರೆ ನನಗೆ ಗೊತ್ತಿಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಗೊತ್ತಿಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಷಣ್ಮುಖಪ್ಪರವರ ತಾಯಿ ನರಸಿಂಹಪ್ಪರವರಿಂದ 22 ಇಂಟು 110 ಅಡಿ ಜಾಗವನ್ನು ಖರೀದಿ ಮಾಡಿದ್ದು ಮತ್ತು ಪಂಚಾಯಿತಿ ದಾಖಲೆಗಳಲ್ಲಿ ಅವರ ಹೆಸರಿಗೆ ಖಾತೆ ಆಗಿದೆ ಎಂದರೆ ಸರಿಯಲ್ಲ. ಷಣ್ಮುಖಪ್ಪರವರು ವಾದಿಗಳ ವಿರುದ್ಧ ಅಸಲು ದಾವಾ ಸಂಖ್ಯೆ 151/2015 ದಾವೆಯನ್ನು ಸಲ್ಲಿಸಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಈಗ ಷಣ್ಮುಖಪ್ಪ ಮತ್ತು ಪ್ರತಿವಾದಿಗಳು ಮೇಲ್ಕಂಡ ಆಸ್ತಿಯಲ್ಲಿ ಸ್ವಾಧೀನಾನುಭವದಲ್ಲಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. 5 ನೇ ಪ್ರತಿವಾದಿ ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದಾರೆ ಎಂದರೆ ಸರಿಯಲ್ಲ. 5 ನೇ ಪ್ರತಿವಾದಿ ಈಗ ಮರಣ ಹೊಂದಿದ್ದಾರೆ. ಈಗ ಪ್ರತಿವಾದಿ 5(ಎ) ರಿಂದ (ಇ) ರವರು ಸ್ವಾಧೀನಾನುಭವದಲ್ಲಿದ್ದಾರೆ ಎಂದರೆ ಸರಿಯಲ್ಲ. ಪ್ರತಿವಾದಿ 1 ಮತ್ತು 2 ರವರ ತಂದೆಯ ಸಮಾಧಿಯನ್ನು ಸಹ ದಾವಾ ಆಸ್ತಿಯಲ್ಲಿ ನಿರ್ಮಿಸಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯಲ್ಲಿ ಒಂದುಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದಾರೆ ಅವರ ಹೆಸರು ನನಗೆ ಗೊತ್ತಿಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಗಳು ಬಣವೆ, ತಿಪ್ಪೆ , ವ್ಯವಸಾಯ ಉಪಕರಣಗಳನ್ನು ಮತ್ತು ನೀಲಗಿರಿ ಮತ್ತು ತೆಂಗಿನ ಮರಗಳನ್ನು ಹಾಕಿ ಕೊಂಡು ಸ್ವಾಧೀನಾನುಭವದಲ್ಲಿದ್ದಾರೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ದಾವಾ ಆಸ್ತಿಯಲ್ಲಿ ಮನೆಯನ್ನು ಕಟ್ಟಿಕೊಂಡು ವಿದ್ಯುತ್ ಸಂಪರ್ಕವನ್ನು ಪಡೆದುಕೊಂಡಿರುವ ಬಗ್ಗೆ ನನಗೆ ಗೊತ್ತಿಲ್ಲ. ದಾವಾ ಆಸ್ತಿಯಲ್ಲಿ ಎಲೆಕ್ಟ್ರಿಕಲ್ ಪೋಲ್ ಗಳನ್ನು ಹಾಕಿದ್ದಾರೆ ಎಂದರೆ ಸರಿಯಲ್ಲ.

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ಎಲ್ಲಾ ವಿಚಾರಗಳು ಸುಳ್ಳಿನಿಂದ ಕೂಡಿದೆ ಎಂದರೆ ಸರಿಯಲ್ಲ. ಈ ದಾವೆಯ ಬಗ್ಗೆ ನನಗೆ ಯಾವುದೇ ವಿಚಾರ ಗೊತ್ತಿಲ್ಲದಿದ್ದರೂ ಸಹ ವಾದಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯು ವ್ಯವಸಾಯ ಜಮೀನಾಗಿ ಉಳಿದುಕೊಂಡಿಲ್ಲ ಪ್ರತಿವಾದಿಗಳು ಮನೆಯನ್ನು ಕಟ್ಟಿಕೊಂಡು ವಾಸವಾಗಿದ್ದಾರೆ ಎಂದರೆ ಸರಿಯಲ್ಲ. ವಾದಿಗಳು ಪ್ರತಿವಾದಿಗಳಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆಯನ್ನು ಸಲ್ಲಿಸಿ, ನನ್ನ ಮೂಲಕ ಸುಳ್ಳು ಸಾಕ್ಷಿ ಹೇಳಿಸುತ್ತಿದ್ದಾರೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ  ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.